# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:543:ಗ್ರಾಪಂಕಾ:2016, ದಿನಾಂಕ:26.10.2016
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ:UPLOK-1/DE/577/2016/ARE-8 Date:11.12.2018
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/577/2016/ARE-8 Date:13.12.2018
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/54/ಗ್ರಾಪಂಕಾ/2019 ದಿನಾಂಕ:12.02.2019
5. ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 11.03.2019

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶದಲ್ಲಿ ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ"

"ಶ್ರೀಮತಿ ಜ್ಯೋತಿಬಾಯಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ- ಆಪಾದಿತ ಸರ್ಕಾರಿ ನೌಕರರಾದ ನೀವು ಅಂಕುಶದೊಡ್ಡಿ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ 2014-15ನೇ ಸಾಲಿನ 13ನೇ ಹಣಕಾಸು ಯೋಜನೆಯ ಕ್ರಿಯಾ ಯೋಜನೆಯ ಅನುಷ್ಟಾನದ ಕಾರ್ಯದಲ್ಲಿ ಪಂಚಾಯಿತಿಯ ಕರವಸೂಲಿಗಾರರಾದ ಲಿಂಗನಗೌಡ ಮತ್ತು ಪಂಚಾಯಿತಿಯವರಿಗೆ ಆ ಯೋಜನೆಯ ಅನುಬಂಧ-1 ರಂತೆ ಚೆಕ್‌ಗಳನ್ನು ನೀಡಿದ್ದು ಮತ್ತು ಆ ಯೋಜನೆಯ ಕೂಲಿಕಾರರಗಿಗೆ ಹಣವನ್ನು ಚೆಕ್ ಮುಖಾಂತರ ಪಾವತಿ ಮಾಡದೇ, ಆ ನಿಯಮದ ಮಾರ್ಗಸೂಚಿಗಳನ್ನು ಉಲ್ಲಂಘಿಸಿದ್ದಲ್ಲದೇ, ಹಣ ದುರುಪಯೋಗಕ್ಕೆ ಆಸ್ಪದ ಮಾಡಿಕೊಟ್ಟು ಕರ್ತವ್ಯಲೋಪವೆಸಗಿರುತ್ತೀರಿ. ಅದಲ್ಲದೇ, ದಿನಾಂಕ: 05.09.2014 ರಂದು ಒಂದೇ ದಿನದಲ್ಲಿ ಬೀದಿ ದೀಪ ಮತ್ತು ನೀರು ನಿರ್ವಹಣೆ ವೆಚ್ಚಕ್ಕಾಗಿ ಅಂಗಡಿ ಮಾಲೀಕರ ಹೆಸರಿಗೆ ರೂ. 2,56,000/- ಪಾವತಿ ಮಾಡಿ ಮತ್ತು ರೂ.35,000/- ಹಣವನ್ನು ಬಿ.ಎಸ್ ಆನಂದಕುಮಾರ್ ಜೆರಾಕ್ಸ್ ಲಿಂಗಸುಗೂರುರವರಿಗೆ ಜೆರಾಕ್ಸ್‌ಗಾಗಿ ಖರ್ಚಾಗಿದೆ ಎಂದು ಸುಳ್ಳು ಲೆಕ್ಕ ತೋರಿಸಿ ಪಾವತಿ ಮಾಡಿದ್ದು ಪಂಚಾಯತ್ ರಾಜ್ ಕೈಪಿಡಿ 2008ರ ಅಧಿನಿಯಮ, ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳ ನಿಯಮ 46(5)ರ ಪ್ರಕಾರ ಸಾಮಗ್ರಿಗಳನ್ನು ಖರೀದಿಸುವುದಕ್ಕೆ ಮತ್ತುಕೊಂಡುಕೊಂಡಿರುವುದಕ್ಕೆ, ಅವುಗಳನ್ನು ಉತ್ತಮ ಸ್ಥಿತಿಯಲ್ಲಿ ಕೊಂಡುಕೊಳ್ಳಲಾಗಿದೆಯೇ ಹಾಗೂ ಅವುಗಳನ್ನು ದಾಸ್ತಾನಿಗೆ ತೆಗೆದುಕೊಳ್ಳಲಾಗಿದೆಯೇ ಎಂಬುದರ ಬಗ್ಗೆ ಬಿಲ್ಲುಗಳ ಮೇಲೆ ದೃಢೀಕರಿಸದೇ, ಆ ನಿಯಮ ಉಲ್ಲಂಘಿಸಿದ್ದು, ಹಾಗೂ ದಾಸ್ತಾನಿನ ಪುಸ್ತಕವನ್ನು ನಿಗಧಿತ ನಮೂನೆ-32 ರಂತೆ ನಿರ್ವಹಿಸದೇ, ಸಾಮಾನ್ಯ ನಮೂನೆಯಲ್ಲಿ ನಿರ್ವಹಿಸಿ ಕರ್ತವ್ಯಲೋಪವೆಸಗಿರುತ್ತೀರಿ.

ಆದಕಾರಣ ಸರ್ಕಾರಿ ಆಪಾದಿತ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ನಿಷ್ಠೆಯನ್ನು ತೋರಿಸದೆ, ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ನೀವು ಕರ್ನಾಟಕ ಸರ್ಕಾರಿ ಸೇವಾ (ಸದ್ವರ್ತನೆ) ನಿಯಮಾವಳಿ 1966 ರ 3(1) (i) ರಿಂದ (iii) ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ ಎಸಗಿದ ಅವ್ಯವಹಾರವು ಸಾಬೀತಾಗಿರುವುದರಿಂದ ಸದರಿಯವರಿಗೆ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ ಆದ್ದರಿಂದ ಇದನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

In the cross examination of PW-2 it has been elicited that the works carried out were under the 13th Finance Plan and they are of emergent in nature. Counsel for DGO has pointed out to the guidelines No.4 to 6 of 13th Finance Commission. Copy of the guideline is marked as Ex.P.5. The DGO has contended that the E.O has the power to approve such actions and that those works were executed and there is no misappropriation. Further it has been elicited in the cross of PW-2 that there has been no misappropriation of funds. But he has deposed that there has been non compliance of Rules.

It is not in dispute that the cheque was issued in the name of the bill collector. However, DGO contends that the payments have been made to the coolies by cash through the bill collector and that it has been admitted by PW-1 and PW-2 in the cross examination. But this will not cure the defect when the rule prescribes that the payment should be made to the account of the labourers through cheque or account transfer. The DGO could not have issued it in the name of the Bill Collector and then get it distributed through him.

DGO further contends that there were no banks in the Gram Panchayath Limits. But there will be a post office in each Gram Panchayath where labourers could have opened the account. Further even if there is no bank in the Gram Panchayath Limits, there would be some bank nearby, though not in the Gram Panchayath Limits. Hence this defense is also not acceptable.

Stock register is not maintained in the prescribed form as prescribed in form-32. In this regard, the defence of the DGO is that the has maintained the stock register in

the prescribed Form-32. She has produced EX-D1 which is under Form-32. the Same was confronted to PW-2 in the cross. PW-2 has deposed that the said register was not produced during the time of inspection. DGO has contended that she was not intimated about the 2nd visit of the PW-2 to Gram Panchayath. PW-2 has stated that during his 2nd visit, DGO was not the PDO but some other person was there and that EX-D1 was not produced.

The defence of DGO is not acceptable. The document EX-D1 must have been prepared later and produced. If at all Ex.D-1 was there at that time, then the PDO would have produced it before PW-2 during the time of inspection. DGO further contends that the complaint is baseless as the complainant himself has submitted the letter Exp-6(f) seeking to withdraw the complaint. This letter Exp-6(f) has no much value. Complainant cannot withdraw the complaint at his whims and facy. The oral and documentary evidence are sufficient to appreciate the charge.

ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಈ ಕೆಳಕಂಡಂತೆ ಶಿಫಾರಸ್ಸು ಮಾಡಿರುತ್ತಾರೆ.

Having regard to the nature of charges proved against DGO Smt. Jyothi Bai, it is hereby recommended to the Government for imposing penalty of withholding four annual increments payable to DGO Smt. Jyothi Bai, Panchayath Development Officer, Ankushadoddi Grama Panchayath, Lingasugur Taluk, Raichur District, with cumulative effect.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಧಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ಸದರಿಯವರಿಗೆ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:54:ಗ್ರಾಪಂಕಾ:2019 ಬೆಂಗಳೂರು, ದಿನಾಂಕ–28–05–2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸಿದ ವೇಳೆಯಲ್ಲಿ ಎಸಗಿದ ಅವ್ಯವಹಾರವು ಸಾಬೀತಾಗಿರುವುದರಿಂದ ಸರ್ಕಾರವು, ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಸದರಿಯವರಿಗೆ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

29/5/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ,
6. ಶ್ರೀಮತಿ. ಜ್ಯೋತಿಬಾಯಿ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಕುಶದೊಡ್ಡಿ ಗ್ರಾಮ ಪಂಚಾಯಿತಿ, ಲಿಂಗಸಗೂರು ತಾಲ್ಲೂಕು, ರಾಯಚೂರು ಜಿಲ್ಲೆ,
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.